# All India Radio: Bangalore
# National Bulletin In Kannada
# 02.04.2026 19.35 hrs

## ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

## 02.04.2026 19.35 hrs

***************

**ಮುಖ್ಯಾಂಶಗಳು**

1. **ಆಂಧ್ರಪ್ರದೇಶ ಪುನರ್ವಿಂಗಡಣೆ ತಿದ್ದುಪಡಿ ಮಸೂದೆ 2026 ಅನ್ನು ಸರ್ವಾನುಮತದಿಂದ ಅಂಗೀಕರಿಸಿದ ಸಂಸತ್ತಿನ ಉಭಯ ಸದನಗಳು**
2. **ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆ: ಬಿಜೆಪಿ ಅಭ್ಯರ್ಥಿಗಳ ಪರ ಮತಯಾಚಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ**
3. **ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಅಸ್ಸಾಂನ ಕರ್ಬಿ ಅಂಗ್ಲಾಂಗ್‌ನಲ್ಲಿ 244–ಎ ವಿಧಿಯನ್ನು ಜಾರಿಗೆ ತರುವುದಾಗಿ ರಾಹುಲ್ ಗಾಂಧಿ ಭರವಸೆ**
4. **ಐಪಿಎಲ್ ಟಿ–20 ಕ್ರಿಕೆಟ್: ಕೊಲ್ಕತ್ತಾ ನೈಟ್ ರೈಡರ್ಸ್, ಸನ್‌ರೈಸರ್ಸ್ ಹೈದಾರಾಬಾದ್ ಮುಖಾಮುಖಿ**

***************

ಆಂಧ್ರಪ್ರದೇಶ ಪುನರ್ವಿಂಗಡಣೆ ತಿದ್ದುಪಡಿ ಮಸೂದೆ 2026 ಭಾರತದ ಸಂಸತ್ತಿನ ಉಭಯ ಸದನಗಳಲ್ಲಿ ಸರ್ವಾನುಮತದಿಂದ ಅಂಗೀಕಾರಗೊಂಡಿರುವುದನ್ನು ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಸ್ವಾಗತಿಸಿದ್ದಾರೆ.

ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಅವರು, ಇದು ಆಂಧ್ರಪ್ರದೇಶಕ್ಕೆ ಮಹತ್ವದ ಬೆಳವಣಿಗೆಯಾಗಿದ್ದು, ಈ ಶಾಸನವು ಆಂಧ್ರಪ್ರದೇಶದ ಜನರ ಸಾಮೂಹಿಕ ಇಚ್ಛಾಶಕ್ತಿ ಮತ್ತು ಆಕಾಂಕ್ಷೆಗಳನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದರು. ಈ ನಿರ್ಧಾರವು ಅಮರಾವತಿಯ ಸ್ಥಾನಮಾನದ ಕುರಿತು ಸ್ಪಷ್ಟತೆಯನ್ನು ಒದಗಿಸುತ್ತದೆ ಮತ್ತು ಅದನ್ನು ರಾಜ್ಯದ ಏಕೈಕ ರಾಜಧಾನಿಯಾಗಿ ದೃಢಪಡಿಸುತ್ತದೆ ಎಂದು ಅವರು ತಿಳಿಸಿದರು.

ಅಮರಾವತಿಯ ಕಡೆಗೆ ಪ್ರಧಾನಿ ನರೇಂದ್ರ ಮೋದಿ ಅವರ ನಿರಂತರ ಬೆಂಬಲಕ್ಕಾಗಿ ಮುಖ್ಯಮಂತ್ರಿಗಳು ಕೃತಜ್ಞತೆಗಳನ್ನು ವ್ಯಕ್ತಪಡಿಸಿದರು. ಮಸೂದೆ ಅಂಗೀಕಾರಕ್ಕೆ ಅನುಕೂಲ ಮಾಡಿಕೊಟ್ಟ ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಕೇಂದ್ರ ಸರ್ಕಾರದ ಪಾತ್ರವನ್ನು ಅವರು ಶ್ಲಾಘಿಸಿದರು.

***************

ಪಶ್ಚಿಮ ಬಂಗಾಳದ ಭವಾನಿಪುರ ವಿಧಾನಸಭಾ ಕ್ಷೇತ್ರದ ಬಿಜೆಪಿ ಪಕ್ಷದ ಅಭ್ಯರ್ಥಿ ಸುವೇಂದು ಅಧಿಕಾರಿ ಮತ್ತು ರಾಶ್‌ಬೆಹಾರಿ, ಬ್ಯಾಲಿಗಂಗೆ ಮತ್ತು ಚೌರಂಘೀ ವಿಧಾನಸಭಾ ಕ್ಷೇತ್ರಗಳ ಬಿಜೆಪಿ ಅಭ್ಯರ್ಥಿಗಳು ಇಂದು ತಮ್ಮ ನಾಮಪತ್ರಗಳನ್ನು ಸಲ್ಲಿಸಿದರು.

ಇವರನ್ನು ಬೆಂಬಲಿಸಿ, ಬಿಜೆಪಿಯ ಹಿರಿಯ ನಾಯಕ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಕೋಲ್ಕತ್ತಾದಲ್ಲಿ ನಡೆದ ರೋಡ್ ಶೋನಲ್ಲಿ ಭಾಗವಹಿಸಿ ಮಾತನಾಡಿದರು.

ಬಿಜೆಪಿ ವತಿಯಿಂದ ಆಯೋಜಿಸಿದ್ದ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ ಅವರು, ದಶಕಗಳಿಂದ ರಾಜ್ಯವನ್ನಾಳುತ್ತಿರುವ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ನೇತೃತ್ವದ ತೃಣಮೂಲ ಕಾಂಗ್ರೆಸ್ ಸರ್ಕಾರದ, ತುಷ್ಟೀಕರಣ ರಾಜಕಾರಣ ಕೊನೆಗೊಳ್ಳುವ ಕಾಲ ಹತ್ತಿರ ಬಂದಿದೆ. ಮಮತಾ ಬ್ಯಾನರ್ಜಿಯವರ ಸ್ವಕ್ಷೇತ್ರ ಭವಾನಿಪುರದಲ್ಲಿ ಈಗ ಬದಲಾವಣೆಯ ಸ್ಪಷ್ಟ ಮುನ್ಸೂಚನೆಗಳು ಕಾಣಿಸುತ್ತಿವೆ ಎಂದು ಹೇಳಿದರು.

142 ಸ್ಥಾನಗಳಿಗೆ ಎರಡನೇ ಹಂತದ ವಿಧಾನಸಭಾ ಚುನಾವಣೆಗೆ ಇಂದು ಅಧಿಸೂಚನೆ ಪ್ರಕಟವಾಗಿದೆ. ಈ ಹಂತದ ನಾಮಪತ್ರ ಸಲ್ಲಿಸಲು ಇದೇ 9 ಕೊನೆಯ ದಿನವಾಗಿದ್ದು, ಏಪ್ರಿಲ್ 29 ರಂದು ಮತದಾನ ನಿಗದಿಯಾಗಿದೆ.

***************

ಅಸ್ಸಾಂನ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಕಾಂಗ್ರೆಸ್ ಹಿರಿಯ ನಾಯಕ ಮತ್ತು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಕರ್ಬಿ ಅಂಗ್ಲಾಂಗ್ ಮತ್ತು ಜೋರ್ಹಾತ್ ಕ್ಷೇತ್ರಗಳಲ್ಲಿ ಪಕ್ಷದ ಅಭ್ಯರ್ಥಿಗಳ ಪರ ಚುನಾವಣಾ ಪ್ರಚಾರ ಮಾಡಿದರು.

ಬಳಿಕ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಅಸ್ಸಾಂನ ಕರ್ಬಿ ಅಂಗ್ಲಾಂಗ್‌ನಲ್ಲಿ 244–ಎ ವಿಧಿಯನ್ನು ಜಾರಿಗೆ ತರುವುದಾಗಿ ಭರವಸೆ ನೀಡಿದರು.

ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಅಧಿಕಾರದ ವಿಕೇಂದ್ರೀಕರಣದಲ್ಲಿ ನಂಬಿಕೆ ಇಡುತ್ತದೆ. ಅರ್ಥಪೂರ್ಣ ಬದಲಾವಣೆಯು ತಳಮಟ್ಟದಿಂದ ಆರಂಭವಾಗಬೇಕು. ಬಿಜೆಪಿ ಈ ರಾಜ್ಯವನ್ನು ದೆಹಲಿಯಿಂದ ನಡೆಸಲು ಪ್ರಯತ್ನಿಸುತ್ತಿದೆ ಎಂದು ಅವರು ಆರೋಪಿಸಿದರು.

***************

ಲೋಕಸಭೆಯು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ಸಾಮಾನ್ಯ ಆಡಳಿತ ಮಸೂದೆ, 2026 ಅನ್ನು ಪರಿಗಣನೆಗೆ ಮತ್ತು ಅಂಗೀಕಾರಕ್ಕಾಗಿ ಕೈಗೆತ್ತಿಕೊಂಡಿದೆ. ರಾಜ್ಯಸಭೆಯು ಈಗಾಗಲೇ ಮಸೂದೆಯನ್ನು ಅಂಗೀಕರಿಸಿದೆ.

ಗೃಹ ವ್ಯವಹಾರಗಳ ರಾಜ್ಯ ಸಚಿವ ನಿತ್ಯಾನಂದ ರೈ ಅವರು, ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳಲ್ಲಿನ ಗ್ರೂಪ್ ಎ ಜನರಲ್ ಡ್ಯೂಟಿ ಅಧಿಕಾರಿಗಳು ಮತ್ತು ಇತರ ಅಧಿಕಾರಿಗಳ ನೇಮಕಾತಿ ಮತ್ತು ಸೇವಾ ಷರತ್ತುಗಳನ್ನು ನಿಯಂತ್ರಿಸುವ ಸಾಮಾನ್ಯ ನಿಯಮಗಳನ್ನು ನಿಯಂತ್ರಿಸುವ ಗುರಿಯನ್ನು ಹೊಂದಿರುವ ಮಸೂದೆಯನ್ನು ಮಂಡಿಸಿದರು. ಇನ್ಸ್‌ಪೆಕ್ಟರ್ ಜನರಲ್ ಶ್ರೇಣಿಯ ಒಟ್ಟು ಹುದ್ದೆಗಳಲ್ಲಿ ಶೇ. 50 ರಷ್ಟು ಮತ್ತು ಹೆಚ್ಚುವರಿ ಮಹಾನಿರ್ದೇಶಕರ ಶ್ರೇಣಿಯ ಹುದ್ದೆಗಳಲ್ಲಿ ಕನಿಷ್ಠ ಶೇ. 67 ರಷ್ಟು ಮತ್ತು ವಿಶೇಷ ಮಹಾನಿರ್ದೇಶಕ ಹಾಗೂ ಮಹಾನಿರ್ದೇಶಕ ಜನರಲ್ ಶ್ರೇಣಿಯ ಎಲ್ಲಾ ಹುದ್ದೆಗಳಿಗೆ ನಿಯೋಜನೆಯ ಮೇರೆಗೆ ಐಪಿಎಸ್ ಅಧಿಕಾರಿಗಳನ್ನು ಭರ್ತಿ ಮಾಡಬೇಕು ಎಂಬ ನಿಬಂಧನೆಗಳನ್ನು ಮಸೂದೆ ಹೊಂದಿದೆ.

ಶಾಸನ ಕುರಿತಾದ ಚರ್ಚೆಯನ್ನು ಪ್ರಾರಂಭಿಸಿದ ಕಾಂಗ್ರೆಸ್‌ನ ಹರೀಶ್ ಚಂದ್ರ ಮೀನಾ, ಇದು ದೇಶದ ಆಂತರಿಕ ಭದ್ರತೆಗೆ ಸಂಬಂಧಿಸಿದ ವಿಷಯವಾಗಿದ್ದು, ಇದನ್ನು ವಿವರವಾಗಿ ಚರ್ಚಿಸಬೇಕಾಗಿದೆ ಎಂದು ಮಸೂದೆಯನ್ನು ವಿರೋಧಿಸಿದರು.

ದೇಶದ ಆಂತರಿಕ ಭದ್ರತೆಯನ್ನು ಖಾತ್ರಿಪಡಿಸುವಲ್ಲಿ ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳು ನಿರ್ಣಾಯಕ ಪಾತ್ರ ವಹಿಸುತ್ತವೆ ಎಂದು ಬಿಜೆಪಿಯ ರಾವ್ ರಾಜೇಂದ್ರ ಸಿಂಗ್ ಹೇಳಿದರು. ಯಾವುದೇ ರಾಷ್ಟ್ರದ ಪ್ರಗತಿ ಮತ್ತು ಅಭಿವೃದ್ಧಿಯಲ್ಲಿ ಬಲವಾದ ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಮಾಜದಲ್ಲಿನ ಶಾಂತಿಯ ಮಟ್ಟವನ್ನು ಅವಲಂಬಿಸಿದೆ. ದೇಶದ ಭದ್ರತಾ ಚೌಕಟ್ಟನ್ನು ಬಲಪಡಿಸಲು ಈ ಪಡೆಗಳು ಸಹಾಯ ಮಾಡುತ್ತದೆ ಎಂದು ಅವರು ತಿಳಿಸಿದರು.

ಕೇಂದ್ರ ಸಶಸ್ತ್ರ ಪೊಲೀಸ್ ಪಡೆಯ ನಿಯೋಗವನ್ನು ಸಂಪರ್ಕಿಸದೆ ಸರ್ಕಾರ ಈ ಮಸೂದೆಯನ್ನು ತಂದಿದೆ ಎಂದು ಸಮಾಜವಾದಿ ಪಕ್ಷದ ಧರ್ಮೇಂದ್ರ ಯಾದವ್ ಆರೋಪಿಸಿದರು.

***************

ಯುವ ವಿಜ್ಞಾನಿ ಕಾರ್ಯಕ್ರಮದಡಿ 9ನೇ ತರಗತಿಯ ಆಯ್ದ ವಿದ್ಯಾರ್ಥಿಗಳಿಗೆ ವಿಜ್ಞಾನ ಕುರಿತ ಶಿಕ್ಷಣ ನೀಡಲಾಗುತ್ತಿದೆ ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ರಾಜ್ಯಸಭೆಯಲ್ಲಿಂದು ತಿಳಿಸಿದ್ದಾರೆ.

ಪ್ರಶ್ನೋತ್ತರ ವೇಳೆಯಲ್ಲಿ ಮಾತನಾಡಿದ ಅವರು, ಯುವ ವಿಜ್ಞಾನಿ ಕಾರ್ಯಕ್ರಮವನ್ನು 2019ರಲ್ಲಿ ಆರಂಭಿಸಲಾಗಿದ್ದು, ಯಶಸ್ವಿಯಾಗಿ ಮುಂದುವರಿಯುತ್ತಿದೆ. ಪ್ರತಿ ವರ್ಷ ಪ್ರತಿ ರಾಜ್ಯದ 10 ವಿದ್ಯಾರ್ಥಿಗಳು ಕೇಂದ್ರಾಡಳಿತ ಪ್ರದೇಶಗಳ ತಲಾ 8 ವಿದ್ಯಾರ್ಥಿಗಳನ್ನು ಕಾರ್ಯಕ್ರಮಕ್ಕೆ ಆಯ್ಕೆ ಮಾಡಲಾಗುತ್ತಿದೆ. ವಿದ್ಯಾರ್ಥಿಗಳಿಗೆ ದೇಶದ ಪ್ರತಿಷ್ಠಿತ ಬಾಹ್ಯಾಕಾಶ ಮತ್ತು ವಿಜ್ಞಾನ ಕೇಂದ್ರಗಳಲ್ಲಿ ಉತ್ತಮ ಶಿಕ್ಷಣ ನೀಡಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದರು.

***************

ಸಂಸತ್ತಿನ ಬಜೆಟ್ ಅಧಿವೇಶನ ಇಂದು ಮುಕ್ತಾಯಗೊಳ್ಳಲಿದೆ. ಮಹಿಳಾ ಮೀಸಲಾತಿಗೆ ಸಂಬಂಧಿಸಿದ ಮಹತ್ವದ ಶಾಸನದ ಚರ್ಚೆಗಾಗಿ, ಎರಡು ಮೂರು ವಾರಗಳ ನಂತರ ಮತ್ತೆ ಸಭೆ ಸೇರಲಿದೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ರಾಜ್ಯಸಭೆಗೆ ತಿಳಿಸಿದ್ದಾರೆ.

ಸದನದ ಶಾಸಕಾಂಗ ವ್ಯವಹಾರಗಳ ಕುರಿತು ಕಾಂಗ್ರೆಸ್‌ನ ಜೈರಾಮ್ ರಮೇಶ್ ಅವರಿಗೆ ಉತ್ತರಿಸಿದ ರಿಜಿಜು, ಸರ್ಕಾರ ಈ ವಿಷಯದ ಬಗ್ಗೆ ಶೇಕಡಾ 80 ಕ್ಕೂ ಹೆಚ್ಚು ಪಕ್ಷಗಳೊಂದಿಗೆ ಸಮಾಲೋಚಿಸಿದೆ. ಆದಾಗ್ಯೂ, ಪ್ರಮುಖ ವಿರೋಧ ಪಕ್ಷವಾದ ಕಾಂಗ್ರೆಸ್, ವಿಧಾನಸಭಾ ಚುನಾವಣೆ ಮುಗಿದ ನಂತರ ಸಂಸತ್ತನ್ನು ಕರೆಯುವಂತೆ ಸರ್ಕಾರಕ್ಕೆ ಪತ್ರ ಬರೆದಿದೆ ಎಂದು ಅವರು ಹೇಳಿದರು.

ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ಎಲ್ಲಾ ಪಕ್ಷಗಳು ತಮ್ಮ ಅಭಿಪ್ರಾಯಗಳನ್ನು ಮಂಡಿಸಲು ಮತ್ತು ಪ್ರಸ್ತಾವನೆಯನ್ನು ಮುಂದುವರೆಸಲು ಈ ವಿಷಯದ ಬಗ್ಗೆ ಸರ್ವಪಕ್ಷ ಸಭೆಯನ್ನು ಕರೆಯಬೇಕೆಂದು ಒತ್ತಾಯಿಸಿದರು. ಕಾಂಗ್ರೆಸ್, ಮಹಿಳಾ ಮೀಸಲಾತಿಗೆ ವಿರುದ್ಧವಾಗಿಲ್ಲ ಎಂದು ಅವರು ತಿಳಿಸಿದರು.

ವಿರೋಧ ಪಕ್ಷದ ಪ್ರಶ್ನೆಗೆ ಉತ್ತರಿಸಿದ ರಾಜ್ಯಸಭೆಯ ಸದನದ ನಾಯಕ ಜೆ.ಪಿ ನಡ್ಡಾ, ಮಹಿಳಾ ಮೀಸಲಾತಿ ಮಸೂದೆಯು, ಮಹಿಳೆಯರ ಘನತೆ ಮತ್ತು ಸಬಲೀಕರಣದ ಕುರಿತಾಗಿದ್ದು, ಇದನ್ನು ಎನ್‌ಡಿಎ ಸರ್ಕಾರ ಪೂರೈಸಿದೆ ಎಂದರು.

***************

ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಇಂದು ನವದೆಹಲಿಯಲ್ಲಿ ವಿದ್ಯಾ ಭಾರತಿ ಅಖಿಲ ಭಾರತೀಯ ಶಿಕ್ಷಾ ಸಂಸ್ಥೆಯ ಕೇಂದ್ರ ಕಚೇರಿಯಾದ ವಿದ್ಯಾ ಭಾರತಿ ಭವನವನ್ನು ಉದ್ಘಾಟಿಸಿದರು.

ನಂತರ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಪಠ್ಯಪುಸ್ತಕಗಳು ಮತ್ತು ಬೋಧನಾ ವಿಧಾನಗಳಿಂದ ಹಿಡಿದು ಭಾಷೆ ಮತ್ತು ಕೌಶಲ್ಯ ಅಭಿವೃದ್ಧಿಯವರೆಗೆ ವಿವಿಧ ಅಂಶಗಳಲ್ಲಿ ವಿದ್ಯಾ ಭಾರತಿಯು ಶಿಕ್ಷಣದಲ್ಲಿ ಯಶಸ್ವಿ ಉಲ್ಲೇಖ ಬಿಂದುವಾಗಿದೆ ಎಂದು ಹೇಳಿದರು. ವಿದ್ಯಾ ಭಾರತಿಯ ಮೌಲ್ಯಗಳು ಮತ್ತು ಕೌಶಲ್ಯ ಅಭಿವೃದ್ಧಿ ಅಭ್ಯಾಸಗಳನ್ನು ಈಗ ರಾಷ್ಟ್ರೀಯ ಪಠ್ಯಕ್ರಮದಲ್ಲಿ ಸೇರಿಸಲಾಗಿದೆ ಎಂದು ಅವರು ತಿಳಿಸಿದರು.

ಹತ್ತು ಬ್ಯಾಗ್ ರಹಿತ ಶಾಲಾ ದಿನಗಳನ್ನು ರಾಷ್ಟ್ರೀಯ ಶಿಕ್ಷಣ ನೀತಿ –ಎನ್‌ಇಪಿ 2020 ಪ್ರಸ್ತಾಪಿಸುತ್ತದೆ ಮತ್ತು ಅಂತಹ ಅಭ್ಯಾಸವು ಪ್ರಾರಂಭದಿಂದಲೂ ವಿದ್ಯಾ ಭಾರತಿಯ ವ್ಯವಸ್ಥೆಯ ಅವಿಭಾಜ್ಯ ಅಂಗವಾಗಿದೆ. ಎನ್‌ಇಪಿ 2020 ರ ಅನುಷ್ಠಾನದ ಅಡಿಯಲ್ಲಿ, ಒಟ್ಟಾರೆ ವ್ಯಕ್ತಿತ್ವ ವಿಕಸನ, ಹೊಸ ವಿಷಯಗಳನ್ನು ಕಲಿಯುವುದು, ನವೀನ ಬೋಧನಾ ವಿಧಾನಗಳನ್ನು ಅಳವಡಿಸಿಕೊಳ್ಳುವುದು ಮತ್ತು ತಂತ್ರಜ್ಞಾನವನ್ನು ಸಂಯೋಜಿಸಲು ನಿರಂತರ ಶಿಕ್ಷಕರ ತರಬೇತಿಗೆ ಒತ್ತು ನೀಡಲಾಗುತ್ತಿದೆ ಎಂದು ಪ್ರಧಾನ್ ತಿಳಿಸಿದರು.

***************

ಕಳೆದ ತಿಂಗಳು 26 ರಿಂದ 29 ರವರೆಗೆ ಕ್ಯಾಮರೂನ್‌ನ ಯೌಂಡೆಯಲ್ಲಿ ನಡೆದ ವಿಶ್ವ ವ್ಯಾಪಾರ ಸಂಸ್ಥೆ–ಡಬ್ಲ್ಯೂಟಿಒನ 14ನೇ ಸಚಿವರ ಸಮ್ಮೇಳನದ ಫಲಿತಾಂಶಗಳ ಕುರಿತು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಇಂದು ಮಾಹಿತಿ ನೀಡಿದರು.

ನವದೆಹಲಿಯಲ್ಲಿ ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಅವರು, ನಾಲ್ಕು ದಿನಗಳ ಸಮ್ಮೇಳನವು ಡಬ್ಲ್ಯೂಟಿಒ ಸುಧಾರಣೆಗಳು, ಮೀನುಗಾರಿಕೆ ಸಬ್ಸಿಡಿಗಳು, ಅಭಿವೃದ್ಧಿಗೆ ಹೂಡಿಕೆ ಸೌಲಭ್ಯ, ಇ–ವಾಣಿಜ್ಯ, ಕೃಷಿ ಮತ್ತು ಇತರ ಅಭಿವೃದ್ಧಿ ಕಾಳಜಿಗಳು ಸೇರಿದಂತೆ ಪ್ರಮುಖ ಜಾಗತಿಕ ವ್ಯಾಪಾರ ವಿಷಯಗಳ ಕುರಿತು ತೀವ್ರವಾದ ಚರ್ಚೆಗಳಿಗೆ ಸಾಕ್ಷಿಯಾಯಿತು ಎಂದು ಹೇಳಿದರು.

ಜಾಗತಿಕ ವ್ಯಾಪಾರದಲ್ಲಿ ಅವರ ಭಾಗವಹಿಸುವಿಕೆಯನ್ನು ಹೆಚ್ಚಿಸಲು ವ್ಯಾಪಾರ ಸರಕು–ಸಾಗಣೆ, ಸಂಪರ್ಕ ಮತ್ತು ಗಡಿ ಪ್ರಕ್ರಿಯೆಗಳನ್ನು ಸುಧಾರಿಸುವತ್ತ ಗಮನಹರಿಸಿ, ಬಹುಪಕ್ಷೀಯ ವ್ಯಾಪಾರ ವ್ಯವಸ್ಥೆಯಲ್ಲಿ ಸಣ್ಣ ಆರ್ಥಿಕತೆಗಳ ಏಕೀಕರಣವನ್ನು ಬಲಪಡಿಸುವ ಗುರಿಯನ್ನು ಹೊಂದಿರುವ ಕ್ರಮಗಳು ಸೇರಿದಂತೆ ಮೂರು ಪ್ರಮುಖ ನಿರ್ಧಾರಗಳನ್ನು ಸಮ್ಮೇಳನದ ಸಮಯದಲ್ಲಿ ಘೋಷಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

***************

ಕೊಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಡೆಯುತ್ತಿರುವ ಐಪಿಎಲ್ ಟಿ–20 ಪಂದ್ಯಾವಳಿಯ ಇಂದಿನ ಪಂದ್ಯದಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ಮತ್ತು ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಕೊಲ್ಕತ್ತಾ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದ್ದು, ಪಂದ್ಯ ಪ್ರಗತಿಯಲ್ಲಿದೆ.

*******ಮುಕ್ತಾಯ********